**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 49 ಟಿಇಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:01-08-2016

**ಸುತ್ತೋಲೆ**

ವಿಷಯ:- ವೃತ್ತಿಪರ ಸಂಸ್ಥೆಗಳು ಹೆಚ್ಚಿನ ಶುಲ್ಕವನ್ನು ಪಡೆಯುತ್ತಿರುವ ಕುರಿತು.

>>><<<

ವೃತ್ತಿಪರ ಶಿಕ್ಷಣ ಕೋರ್ಸು ಆದ ಇಂಜಿನಿಯರಿಂಗ್/ಆರ್ಕಿಟೆಕ್ಚರ್ ಪದವಿ ಕೋರ್ಸುಗಳ ವಿಧ್ಯಾಭ್ಯಾಸ ಹೊಂದುವ ಸಲುವಾಗಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ವಿವಿಧ ಅನುದಾನಿತ/ ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳ/ ಶಿಕ್ಷಣ ಸಂಸ್ಥೆಗಳಿಗೆ ಸೀಟು ಹಂಚಿಕೆಗೊಂಡ ವಿದ್ಯಾರ್ಥಿಗಳು ಸಂಬಂಧಿಸಿದ ಕಾಲೇಜು/ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶಾತಿ ಹೊಂದುವ ಸಂದರ್ಭದಲ್ಲಿ ಹಲವಾರು ಖಾಸಗಿ ಅನುದಾನಿತ/ಅನುದಾರಹಿತ ಶಿಕ್ಷಣ ಸಂಸ್ಥೆಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರವೇಶಾತಿಗೆ ನಿರ್ದಿಷ್ಟಪಡಿಸಿದ ಶುಲ್ಕವನ್ನು ಭರಿಸಿಕೊಳ್ಳದೇ, ಇಂಜಿನಿಯರಿಂಗ್ ಶಿಕ್ಷಣ ಶುಲ್ಕದ ಬಗ್ಗೆ ಸರ್ಕಾರವು ಹೊರಡಿಸಿರುವ ಆದೇಶ ಸಂಖ್ಯೆ ಇಡಿ 21 ಟಿಇಸಿ 2016, ದಿ:31-05-2016ರಲ್ಲಿ ನಿಗಧಿಪಡಿಸಿರುವ ಶುಲ್ಕವನ್ನು ಪಡೆಯದೇ ಹೆಚ್ಚಿನ ಶುಲ್ಕವನ್ನು ಭರಿಸುವಂತೆ ಒತ್ತಾಯಿಸುತ್ತಿರುವುದು ಸರ್ಕಾರದ ಹಾಗೂ ಸಂಬಂಧಪಟ್ಟ ಪ್ರಾಧಿಕಾರದ ಗಮನಕ್ಕೆ ಬಂದಿರುತ್ತದೆ.

ಈ ರೀತಿಯ ನಿಯಮಬಾಹಿರ ವರ್ತನೆಯಿಂದಾಗಿ ಹಲವು ಪೋಷಕರಿಂದ ಆಕ್ಷೇಪಣೆಗಳು, ಟೀಕೆಗಳು ಸ್ವೀಕೃತವಾಗುತ್ತಿದ್ದು, ಹೆಚ್ಚಿನ ಶುಲ್ಕವನ್ನು ಭರಿಸುವಂತೆ ಒತ್ತಾಯಿಸುತ್ತಿರುವ ಕ್ರಮವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. ಆದುದರಿಂದ ಸಂಬಂಧಪಟ್ಟ ಎಲ್ಲಾ ವೃತ್ತಿಪರ ಶಿಕ್ಷಣ ಸಂಸ್ಥೆಗಳು ವೃತ್ತಿಪರ ಕೋರ್ಸುಗಳಾದ ಇಂಜಿನಿಯರಿಂಗ್/ ಆರ್ಕಿಟೆಕ್ಚರ್ ಕೋರ್ಸುಗಳಿಗೆ ಸಂಬಂಧಿಸಿದಂತೆ ಈಗಾಗಲೇ ಸಮ್ಮತಾಭಿಪ್ರಾಯದ ಒಪ್ಪಂದದ ಅನ್ವಯ ನಿಗಧಿಪಡಿಸಿ ಹೊರಡಿಸಲಾದ ಮೇಲೆ ನಮೂದಿಸಿರುವ ಸರ್ಕಾರದ ಆದೇಶದಲ್ಲಿ ನಿಗಧಿಪಡಿಸಲಾದ ಶುಲ್ಕವನ್ನು ಮಾತ್ರ ಪಡೆಯುವಂತೆ ಈ ಮೂಲಕ ಸೂಚಿಸಿದೆ. ಇದಕ್ಕೆ ತಪ್ಪಿದಲ್ಲಿ ಸಂಬಂಧಿಸಿದ ಶಿಕ್ಷಣ ಸಂಸ್ಥೆಗಳ ವಿರುದ್ಧ ನಿಯಮಾನುಸಾರದ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದೆ.

S. Venkatesh

(ಎಸ್.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

1/8/16

ಇವರಿಗೆ,

1) ಅಧ್ಯಕ್ಷರು/ಕಾರ್ಯದರ್ಶಿಗಳು, ರಾಜ್ಯದಲ್ಲಿನ ಎಲ್ಲಾ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಆಡಳಿತ ಮಂಡಳಿಗಳು
2) ಪ್ರಾಂಶುಪಾಲರು, ರಾಜ್ಯದಲ್ಲಿನ ಎಲ್ಲಾ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು
3) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.

4) ಕಾರ್ಯದರ್ಶಿಗಳು, ಕಾಮೆಡ್-ಕೆ, 17ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
5) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು –(ಈ ಸುತ್ತೋಲೆಯನ್ನು ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕ್ರಮವಹಿಸುವುದು)
6) ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನಸಂಗಮ, ಬೆಳಗಾಂ
7) ಮಾನ್ಯ ಉನ್ನತ ಶಿಕ್ಷಣ ಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌದ, ಬೆಂಗಳೂರು.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ/ಶಿಕ್ಷಣ ಸಂಸ್ಥೆಗಳಲ್ಲಿ ಪ.ಜಾತಿ/ಪಂಗಡ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕ ಪಾವತಿಸುವಂತೆ ಒತ್ತಾಯಿಸದಿರುವ ಬಗ್ಗೆ.

ಉಲ್ಲೇಖ: 1) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಸುತ್ತೋಲೆ ದಿನಾಂಕ:30-09-2010
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ಇವರ ಸುತ್ತೋಲೆ ದಿನಾಂಕ:14-09-2012.

*****

**ಪ್ರಸ್ತಾವನೆ:**

ಸಮಾಜ ಕಲ್ಯಾಣ ಇಲಾಖೆಯಿಂದ ವಿಶ್ವವಿದ್ಯಾಲಯಗಳಲ್ಲಿ/ಶಿಕ್ಷಣ ಸಂಸ್ಥೆಗಳಲ್ಲಿ ವಿವಿಧ ತರಗತಿ/ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಅವರ ಕುಟುಂಬದ ವಾರ್ಷಿಕ ಆದಾಯ ರೂ.2.00 ಲಕ್ಷದ ಮಿತಿಯೊಳಗೆ ಇದ್ದಲ್ಲಿ ಸರ್ಕಾರದ ಮಾರ್ಗಸೂಚಿಯನ್ವಯ ಆಯಾ ಕೋರ್ಸ್‌ಗೆ ನಿಗದಿಪಡಿಸಿದ ಕಡ್ಡಾಯ ಶುಲ್ಕವನ್ನು ಪಾವತಿಸಲಾಗುತ್ತಿದೆ. ಉಲ್ಲೇಖ (1) ಮತ್ತು (2)ರ ಸರ್ಕಾರದ ಸುತ್ತೋಲೆಗಳಲ್ಲಿಯೂ ಸಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ದಾಖಲಾಗುವ ಸಮಯದಲ್ಲಿ ಶುಲ್ಕವನ್ನು ಪಾವತಿಸುವಂತೆ ಒತ್ತಾಯಿಸಬಾರದೆಂದು ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ಆದಾಗ್ಯೂ ಸಹ ಕೆಲವು ವಿಶ್ವವಿದ್ಯಾಲಯ/ಶಿಕ್ಷಣ ಸಂಸ್ಥೆಗಳು ಪ್ರವೇಶಾತಿ ಸಂದರ್ಭದಲ್ಲಿ ಮುಂಗಡವಾಗಿ ಶುಲ್ಕ ಪಾವತಿಸುವಂತೆ ವಿದ್ಯಾರ್ಥಿಗಳನ್ನು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆದ್ದರಿಂದ, ಸರ್ಕಾರವು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 83 ಪಕವಿ 2013, ಬೆಂಗಳೂರು ದಿನಾಂಕ:27-06-2013**

1) ವಿವಿಧ ಕಾಲೇಜುಗಳಲ್ಲಿ ವಿವಿಧ ಕೋರ್ಸ್‌ಗಳಿಗೆ ಪ್ರವೇಶಾತಿ ಪಡೆಯುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ.2.00ಲಕ್ಷದ ಮಿತಿಯೊಳಗೆ ಇದ್ದಲ್ಲಿ ಅಂತಹ ಅರ್ಹ ವಿದ್ಯಾರ್ಥಿಗಳಿಂದ ದಾಖಲಾತಿ ಸಮಯದಲ್ಲಿ ಕಡ್ಡಾಯ ಶುಲ್ಕವನ್ನು ಮುಂಗಡವಾಗಿ ಪಾವತಿಸುವಂತೆ ಒತ್ತಾಯಿಸಬಾರದು. ವಿದ್ಯಾರ್ಥಿಗಳ ಅರ್ಹತೆಗೆ ಆಯಾ ತಾಲ್ಲೂಕು ತಹಸೀಲ್ದಾರರು ನೀಡಿದ ಆದಾಯ ಪ್ರಮಾಣ ಪತ್ರ ಮತ್ತು ಜಾತಿ ಪ್ರಮಾಣ ಪತ್ರವನ್ನು ಪಡೆಯುವುದು. ಸದರಿ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಯೋಜನೆಯಡಿಯಲ್ಲಿ ಸಂಬಂಧಪಟ್ಟ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ/ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳು ನೇರವಾಗಿ ಆಯಾ ಸಂಸ್ಥೆಗಳಿಗೆ ಸರ್ಕಾರದ ಮಾರ್ಗಸೂಚನೆಗಳಂತೆ ಶುಲ್ಕವನ್ನು ಸಂದಾಯ ಮಾಡಲಾಗುವುದು.

2) ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ/ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳು ಅರ್ಹ ವಿದ್ಯಾರ್ಥಿಗಳಿಗೆ ಶಿಷ್ಯ ವೇತನವನ್ನು ಮಂಜೂರು ಮಾಡುವಾಗ ಶುಲ್ಕ ಮರುಪಾವತಿಯನ್ನು ಸಹ ನಿಯಮಗಳನುಸಾರ ಮಂಜೂರು ಮಾಡಿ ಆಯಾ ಸಂಸ್ಥೆಗಳಿಗೆ ನೀಡತಕ್ಕದ್ದು.

3) ಸದರಿ ವಿಷಯವನ್ನು ಎಲ್ಲಾ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್‌ಗಳು ಸಂಬಂಧಿಸಿದ ಕಾಲೇಜುಗಳು/ಸಂಸ್ಥೆಗಳಿಗೆ ತಿಳಿಸಿ ಅನುಷ್ಠಾನಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದಿಕ್ ಪಾಷ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಮಾಜ ಕಲ್ಯಾಣ ಇಲಾಖೆ

ಗೆ,

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, [illegible]